# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸರ್ಕಾರದವತಿಯಿಂದ ನಿರ್ಮಿಸಲಾಗುವ ರಸ್ತೆ ಕಾಮಗಾರಿಗಳ ಅಂದಾಜು ವೆಚ್ಚದ ಶೇಕಡ 1 ರಷ್ಟು ರಸ್ತೆ ಬದಿ ನೆಡುತೋಪುಗಳನ್ನು ನಿರ್ಮಿಸಲು ಕಾಯ್ದಿರಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಅಪಜೀ 152 ಎಫ್‌ಎಪಿ 2016 ದಿನಾಂಕ 20.1.2017.

ಪ್ರಸ್ತಾವನೆ:

ಮರಗಳನ್ನು ನೆಡುವುದರಿಂದ ಹಲವಾರು ಪ್ರಯೋಜನಗಳು ಪರಿಸರಕ್ಕೆ ಸಮಾಜಕ್ಕೆ ಮತ್ತು ವೈಯಕ್ತಿಕವಾಗಿ ಲಾಭವಾಗುತ್ತದೆ. ಹವಾಮಾನ ಬದಲಾವಣೆಯನ್ನು ತಡೆಗಟ್ಟಲು ಅವುಗಳ ಪರಿಣಾಮವನ್ನು ಕಡಿಮೆಗೊಳಿಸಲು, ತಾಪಮಾನ ಇಳಿಸಲು ಮತ್ತು ಬರಗಾಲದ ಸಮಯದಲ್ಲಿ ಪ್ರಾಣಿಗಳಿಗೆ ಮೇವು ಒದಗಿಸಲು ಮರಗಳು ಸಹಾಯವಾಗುತ್ತದೆ. ಮರಗಳು ತಾಪಮಾನ, ಗಾಳಿಯ ವೇಗ, ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯ ತಡೆಗಟ್ಟಲು ಸಹಾಯವಾಗುತ್ತವೆ. ಇದರಿಂದ ಜನರು ಆರೋಗ್ಯದಿಂದ ಬದುಕಲು ಅನುಕೂಲವಾಗುತ್ತದೆ. ಪಕ್ಷಿಗಳು, ಪ್ರಾಣಿಗಳಿಗೆ ಆಹಾರ ಮತ್ತು ವಸತಿ ನೀಡಲು ಸಹಕಾರಿಯಾಗುವುದಲ್ಲದೆ ಪ್ರದೇಶದ ಸೌಂದರ್ಯವೂ ಸಹ ಹೆಚ್ಚು ಮರಗಳ ಇಲೆ, ನಾಟಾ ಮತ್ತು ಕೊಂಬೆಗಳಿಂದ ಮಾನವರಿಗೆ ಹಲವರಿಗೆ ಪ್ರಯೋಜನಗಳು ಉಂಟಾಗುತ್ತದೆ. ಈ ಎಲ್ಲಾ ಕಾರಣಗಳಿಂದ ಸರ್ಕಾರವು "ವನ ಮಹೋತ್ಸವ" ಕಾರ್ಯಕ್ರಮವನ್ನು ದೊಡ್ಡ ಪ್ರಮಾಣದಲ್ಲಿ ಆಚರಿಸುತ್ತಿದೆ. ರಾಜ್ಯದ ಹಸಿರು ಹೊದಿಕೆಯನ್ನು ಹೆಚ್ಚಿಸಲು ಲಭ್ಯವಿರುವ ರಸ್ತೆ ಬದಿ ಪ್ರದೇಶದಲ್ಲಿಯೂ ಸಹ ಮರಗಳನ್ನು ನೆಡುವುದು ಅಗತ್ಯವಿರುತ್ತದೆ. ಕೇಂದ್ರ ಸರ್ಕಾರದ ರಸ್ತೆ ಸಾರಿಗೆ ಮತ್ತು ಹೆಚ್ಚಾರಿ ಮಂತ್ರಾಲಯವು ಹಸಿರು ಹೊದಿಕೆಯ Plant and Maintenance Policy ಜಾರಿಗೆ ತಂದಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವತಿಯಿಂದ ಸಹ ಲೋಕೋಪಯೋಗಿ ಇಲಾಖೆ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ (Karnataka State Highways Improvement Project), ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ (Karnataka Road Development Corporation Limited), ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ (Karantaka Rural Roads Development Agency), ಜಿಲ್ಲಾ ಪಂಚಾಯತ್, ತಾಲ್ಲೂಕು ಹಾಗೂ ಗ್ರಾಮ ಪಂಚಾಯತ್‌ಗಳು ನಿರ್ಮಿಸುವ ರಸ್ತೆಗಳ ಕಾಮಗಾರಿಗಳಲ್ಲಿನ ಅಂದಾಜು ವೆಚ್ಚದ ಕನಿಷ್ಠ ಶೇಕಡ 1 ರಷ್ಟನ್ನು ರಸ್ತೆ ಬಡಿ ನೆಡತೋಪು ನೆಡಲು ಕಾಯ್ದಿರಿಸುವ ಪ್ರಸ್ತಾವನೆಯನ್ನು ಸಂಬಂಧಿಸಿದ ಇಲಾಖೆಗಳೊಂದಿಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಸಮಾಲೋಚಿಸಿ ರಾಜ್ಯ ಸರ್ಕಾರದವತಿಯಿಂದ ನಿರ್ಮಿಸಲಾಗುವ ರಸ್ತೆ ಕಾಮಗಾರಿಗಳ ಅಂದಾಜು ವೆಚ್ಚದ ಶೇಕಡ 1 ರಷ್ಟು ಬದಿ ನೆಡುತೋಪುಗಳನ್ನು ನಿರ್ಮಿಸಲು ಕಾಯ್ದಿರಿಸುವ ಕುರಿತು ತೀರ್ಮಾನಿಸಲಾಗಿದೆ.

ಈ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಅರಣ್ಯ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಲು ಹಾಗೂ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ನಿರ್ಮಿಸುವ ರಸ್ತೆಗಳ ಕಾಮಗಾರಿಗಳಲ್ಲಿನ ಅಂದಾಜು ವೆಚ್ಚದಲ್ಲಿನ ಕನಿಷ್ಠ ಶೇಕಡ 1 ರಷ್ಟನ್ನು ರಸ್ತೆ ಬದಿ ನೆಡತೋಪು ನೆಡಲು ಕಾಯ್ದಿರಿಸಲು ನಿರ್ಧರಿಸಲಾಗಿದೆ.

ಆದ್ದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಆದೇಶ ಸಂಖ್ಯೆ: ಗ್ರಾಅಪ:16:ಆರ್‌ಆರ್‌ಸಿ:16(ಭಾಗ-10) ಬೆಂಗಳೂರು, ದಿನಾಂಕ 15.02.2017**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗಳು ಅಭಿವೃದ್ಧಿಪಡಿಸುವ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಲ್ಲಿನ ಒಟ್ಟು ಅಂದಾಜು ವೆಚ್ಚದ ಕನಿಷ್ಠ 1 ರಷ್ಟು ಮೊತ್ತವನ್ನು ರಸ್ತೆ ಬದಿಯ ನೆಡತೋಪು ನೆಡುವ ಕಾರ್ಯಕ್ರಮಕ್ಕೆ ಕಾಯ್ದಿರಿಸಲು ಆದೇಶಿಸಿದೆ.

ಈ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗಳು ಅರಣ್ಯ ಇಲಾಖೆಯೊಂದಿಗೆ ಪರಸ್ಪರ ಸಮನ್ವಯ ಸಾಧಿಸುವಂತೆ ಹಾಗೂ ಈ ಕಾರ್ಯಕ್ರಮವನ್ನು ಅರಣ್ಯ ಇಲಾಖೆ ಮೂಲಕ ಅನುಷ್ಠಾನಕ್ಕೆ ತರುವಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

ಈ ಆದೇಶವನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಆದೇಶ ಸಂಖ್ಯೆ: ಅಪಜೀ 152 ಎಫ್‌ಎಪಿ 2016 ದಿನಾಂಕ 20.01.2017 ರಲ್ಲಿ ಹೊರಡಿಸಿದ ಆದೇಶದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ. ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಜಿ ಮತ್ತು ಎಸ್.ಎಸ್.ಎ)/(ಇ ಮತ್ತು ಆರ್‌ಎಸ್‌ಎ)/ (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
4. ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು

5. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
12. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆ.ಆರ್.ಆರ್.ಡಿ.ಎ., ಬೆಂಗಳೂರು.
13. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
14. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
15. ಎಲ್ಲಾ ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ
16. ಎಲ್ಲಾ ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ ಕೆಆರ್‌ಆರ್‌ಡಿಎ
17. ಎಲ್ಲಾ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ
18. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜ ಭವನ, ಬೆಂಗಳೂರು
19. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೆಲ್ ನಲ್ಲಿ ರವಾನಿಸಲು ಸೂಚಿಸಿದೆ
20. ರಕ್ಷಾ ಕಡತ / ಹೆಚ್ಚುವರಿ ಪ್ರತಿ.